ಬಾಗೇಪಲ್ಲಿ ಗುಡಿಬಂಡೆ ಕ್ಷೇತ್ರ ವ್ಯಾಪ್ತಿಯಲ್ಲಿ ಪಶು ಚಿಕಿತ್ಸಾ ಆಸ್ಪತ್ರೆಗಳಿಗೆ ಔಷಧಿಗಳ ಸರಬರಾಜು

1612 (2069) ಶ್ರೀ ಸಂಪಂಗಿ ಎನ್ (ಬಾಗೇಪಲ್ಲಿ): ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಾಗೇಪಲ್ಲಿ ಗುಡಿಬಂಡೆ ಕ್ಷೇತ್ರ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಪಶು ಚಿಕಿತ್ಸಾ ಘಟಕ ಹಾಗೂ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಆ) ಈ ಪಶು ಆಸ್ಪತ್ರೆಗಳಲ್ಲಿ ಔಷಧೋಪಚಾರಗಳು ಸರಿಯಾಗಿ ಇಲ್ಲದೇ ಜಾನುವಾರುಗಳಿಗೆ ತುಂಬಾ ಅನೂನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಪಶು ಆಸ್ಪತ್ರೆಗಳಲ್ಲಿ ಸರಿಯಾದ ಪ್ರಮಾಣದಲ್ಲಿ ಔಷಧಿಗಳನ್ನು ಸರಬರಾಜು ಮಾಡಿ ಈ ಭಾಗದ ರೈತಾಪಿ ವರ್ಗದ ಜಾನುವಾರುಗಳ ಉತ್ತಮ ಚಿಕಿತ್ಸೆಗೆ ಅನುಕೂಲ ಮಾಡಬಹುದೇ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಬಾಗೇಪಲ್ಲಿ ಗುಡಿಬಂಡೆ ಕ್ಷೇತ್ರದ 4 ಪಶು ಆಸ್ಪತ್ರೆಗಳು, 6 ಪಶು ಚಿಕಿತ್ಸಾಲಯಗಳು 6 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳು ಮತ್ತು 2 ಸಂಚಾರಿ ಪಶು ಚಿಕಿತ್ಸಾಲಯಗಳು ಕಾರ್ಯ ನಿರ್ವಹಿಸುತ್ತಿವೆ.

ಆ) ಇಲ್ಲ.

ಇ) ಕೋಲಾರ ಜಿಲ್ಲೆಗೆ ಸರಬರಾಜಾಗುವ ಎಲ್ಲಾ ಔಷಧಿಗಳನ್ನು ಆಯಾ ಕ್ಷೇತ್ರಗಳಲ್ಲಿನ ಪಶು ವೈದ್ಯಕೀಯ ಸಂಸ್ಥೆಗಳಿಗೆ ಏಕರೂಪ ಅನುಪಾತದಲ್ಲಿ ಹಂಚಿಕೆ ಮಾಡಿ ಸರಬರಾಜು ಮಾಡಲಾಗುತ್ತಿದೆ. ಪ್ರಸಕ್ತ ವರ್ಷದಲ್ಲಿ ಕೋಲಾರ ಜಿಲ್ಲೆಗೆ ಔಷಧಿಗಳನ್ನು ಒದಗಿಸಲು ರೂ. 27.03 ಲಕ್ಷಗಳನ್ನು ಖರ್ಚು ಮಾಡಲಾಗಿದೆ.

ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳು

1613 (1406) ಶ್ರೀ ಶಂಕರಲಿಂಗೇಗೌಡ (ಚಾಮರಾಜ): ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅಲ್ಪಸಂಖ್ಯಾತರು ಯಾರು; ಅವರುಗಳ ಜನಸಂಖ್ಯೆ ವಿವರಗಳನ್ನು ತಿಳಿಸಿ;

ಆ) ಅಲ್ಪಸಂಖ್ಯಾತರ ಕಲ್ಯಾಣ ಸಂಬಂಧ ಸರ್ಕಾರದ ಯೋಜನೆಗಳ ಹಾಲಿ ವಿವರ ತಿಳಿಸಿ;

ಇ) ಕಳೆದ ನಾಲ್ಕು ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳನ್ನು ಯೋಜನೆ ವೆಚ್ಚ ಸಹಿತ ವಿವರಗಳೊಂದಿಗೆ ತಿಳಿಸಿ?

ಶ್ರೀ ಎಂ.ಎಲ್. ಉಸ್ತಾದ್ (ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ರಾಜ್ಯ ಸಚಿವರು):

ಅ) ಕರ್ನಾಟಕ ರಾಜ್ಯದಲ್ಲಿರುವ ಮತೀಯ ಅಲ್ಪಸಂಖ್ಯಾತರ ಸಂಖ್ಯೆಯು 1991ರ ಜನಗಣತಿ ಪ್ರಕಾರ ಕೆಳಕಂಡಂತಿದೆ.-

ಅಲ್ಪಸಂಖ್ಯಾತರು	ಜನಸಂಖ್ಯೆ
1. ಮುಸ್ಲಿಂ	52.34 ಲಕ್ಷ
2. ಕ್ರಿಶ್ಚಯನ್	8.59 ಲಕ್ಷ